ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅತಿಥಿ ಉಪನ್ಯಾಸಕರ ಸಮಸ್ಯೆಗಳ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

766 (998) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಜನ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ ; ಪ್ರತಿ ತಿಂಗಳು ಅವರಿಗೆ ನೀಡುತ್ತಿರುವ ವೇತನ ಮತ್ತಿತರ ಸೌಲಭ್ಯಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವರ ವೇತನ ಹೆಚ್ಚಿಸಬೇಕೆಂಬ ಬೇಡಿಕೆ ಜಾರಿಗೊಳಿಸಲಾಗಿದೆಯೇ; ಜಾರಿಗೊಳಿಸಿದ್ದರೆ ಎಷ್ಟು ವೇನತ ಹೆಚ್ಚಿಸಲಾಗಿದೆ ; ಇಲ್ಲದಿದ್ದಲ್ಲಿ, ಯಾವಾಗ ಹೆಚ್ಚಿಸಲಾಗುವುದು ;

(ಇ) ಅತಿಥಿ ಉಪನ್ಯಾಸಕರು ಸೇವೆಯನ್ನು ಖಾಯಂಗೊಳಿಸಬೇಕೆಂದು ಹಲವಾರು ದಿನಗಳಿಂದ ಹೋರಾಟ ನಡೆಸುತ್ತಿದ್ದು, ಅವರನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?